# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಸುಜಾತ ಡಿ.ಅವರಾದಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಆಂದೋಲ ಗ್ರಾಮ ಪಂಚಾಯಿತಿ, ಜೇವರ್ಗಿ ತಾಲ್ಲೂಕು, ಕಲಬುರಗಿ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:**

ಉಪ ನಿಬಂಧಕರು, ವಿಚಾರಣೆಗಳು–3, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಪತ್ರ ಸಂಖ್ಯೆ:ಅ.ಸ.ಪ.ಸಂ. ಕಂಪ್ಲೇಂಟ್/ ಉಪಲೋಕ್/ಜಿಎಲ್‌ಬಿ/5686/2013/ಡಿಆರ್‌ಇ–3, ದಿನಾಂಕ:23–08–2016

**ಪ್ರಸ್ತಾವನೆ:**

ಮೇಲೆ ಓದಲಾದ ಉಪ ನಿಬಂಧಕರು, ವಿಚಾರಣೆಗಳು–3, ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ:05–08–2016 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ಶ್ರೀ ಸುಜಾತ ಡಿ.ಅವರಾದಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಆಂದೋಲ ಗ್ರಾಮ ಪಂಚಾಯಿತಿ, ಜೇವರ್ಗಿ ತಾಲ್ಲೂಕು, ಕಲಬುರಗಿ ಜಿಲ್ಲೆ, ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣಾ ಉದ್ಯೋಗ ಖಾತರಿ ಯೋಜನೆಯಡಿ ಕೂಲಿ ಕಾರ್ಮಿಕರಿಗೆ ಪಾವತಿಸಬೇಕಾದ ಅನುದಾನವನ್ನು ದುರುಪಯೋಗ ಪಡಿಸಿಕೊಂಡಿರುತ್ತಾರೆ ಎಂದು ಹಾಗೂ ಗ್ರಾಮ ಪಂಚಾಯಿತಿಗೆ ಸೇರಿದ ಅಂಚೆ ಕಛೇರಿ ಕಟ್ಟಡವನ್ನು ವೈಯಕ್ತಿಕ ವ್ಯಕ್ತಿಗೆ ಮಾಡಿರುತ್ತಾರೆಂದು ದುರುದಾರರಾದ ಶ್ರೀ.ಕೆ ಸಿದ್ಧಲಿಂಗ ಸ್ವಾಮಿಜಿ, ಶ್ರೀ ಕರುಣೇಶ್ವರ ಮಠ, ಆಂದೋಲ, ಜೇವರ್ಗಿ ತಾಲ್ಲೂಕು, ಕಲಬುರಗಿ ಜಿಲ್ಲೆ, ಇವರು ಸಲ್ಲಿಸಿದ ದೂರಿನಂತೆ ನಡೆಸಿದ ತನಿಖೆ ಅನುಸಾರ

" ಸರ್ವೆ ನಂ:396 ರಲ್ಲಿ ತೋಟಗಾರಿಕೆ ಕಾಮಗಾರಿಗಾಗಿ ಒಟ್ಟು ರೂ.2,48,600/– ಗಳು ವೆಚ್ಚವಾಗಿರುತ್ತದೆಂದು ನಮೂದಿಸಲಾಗಿದ್ದು, ಅದರಲ್ಲಿ ರೂ.1,54,570/– ಗಳನ್ನು ಕೂಲಿಯ ವೆಚ್ಚವಾಗಿ ಹಾಗೂ ರೂ.94,030/– ಗಳನ್ನು ಸಾಮಗ್ರಿ ಖರೀದಿಗಾಗಿ ನಮೂದಿಸಲಾಗಿರುತ್ತದೆ. ಆದರೆ ಸಾಮಗ್ರಿ ಖರೀದಿಗಳ ಬಿಲ್ಲಿನಲ್ಲಿ ರೂ.73,200/– ಗಳನ್ನು ಮಾತ್ರ ಪಾವತಿಸಿರುವುದು ಕಂಡು ಬರುತ್ತದೆ. ಕೆಲಸ ನಿರ್ವಹಿಸಿದ ಕೂಲಿ ಕಾರ್ಮಿಕರ ಸಂಖ್ಯೆ ಮತ್ತು ಕೆಲಸದ ಸ್ವರೂಪ ಇವುಗಳು ಕಂಡು ಬರುತ್ತಿಲ್ಲ. ಶ್ರೀ ಸುಜಾತ ಡಿ. ಅವರಾದಿ, ಇವರು ಯೋಜನೆಯಡಿ ವೆಚ್ಚ ಭರಿಸಿರುವುದನ್ನು ಪುಷ್ಟೀಕರಿಸುವುದಕ್ಕೆ ಸಮರ್ಪಕ ದಾಖಲೆಗಳನ್ನು ಒದಗಿಸಿರುವುದಿಲ್ಲ. ಶ್ರೀ ಮಲ್ಲಿಕಾರ್ಜುನ ಇವರು ಹಣ ಪಾವತಿಗೆ ಅನುಮೋದಿಸಿರುವುದಕ್ಕೆ ಯಾವುದೇ ದಾಖಲೆಗಳನ್ನು ಒದಗಿಸಿರುವುದಿಲ್ಲ."

ಇದರಿಂದ ಶ್ರೀ ಸುಜಾತ ಡಿ.ಅವರಾದಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಆಂದೋಲ ಗ್ರಾಮ ಪಂಚಾಯಿತಿ, ಜೇವರ್ಗಿ ತಾಲ್ಲೂಕು, ಕಲಬುರಗಿ ಜಿಲ್ಲೆ, ಇವರು ಕರ್ತವ್ಯ ಪಾಲನೆಯಲ್ಲಿ ಸಂಪೂರ್ಣ ಪ್ರಾಮಾಣಿಕತೆ ಹಾಗೂ ನಿಷ್ಠೆ ತೋರದೆ ಮತ್ತು ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಉಕ್ತವಾದ ದುರ್ನಡತೆ ಎಸಗಿರುವುದರಿಂದ ಶ್ರೀ ಸುಜಾತ ಡಿ.ಅವರಾದಿ, ಕಾರ್ಯದರ್ಶಿ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/563/ಗ್ರಾಪಂಕಾ/2016 ಬೆಂಗಳೂರು, ದಿನಾಂಕ:-10-11-2016.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಸುಜಾತ ಡಿ.ಅವರಾದಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಆಂದೋಲ ಗ್ರಾಮ ಪಂಚಾಯಿತಿ, ಜೇವರ್ಗಿ ತಾಲ್ಲೂಕು, ಕಲಬುರಗಿ ಜಿಲ್ಲೆ, ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ವಿ ಅರುಣ್ ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಉಪ ನಿಬಂಧಕರು, ವಿಚಾರಣೆಗಳು-3, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕಲಬುರಗಿ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಜೇವರ್ಗಿ ತಾಲ್ಲೂಕು, ಕಲಬುರಗಿ ಜಿಲ್ಲೆ.
6. ಶ್ರೀ ಸುಜಾತ ಡಿ.ಅವರಾದಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಆಂದೋಲ ಗ್ರಾಮ ಪಂಚಾಯಿತಿ, ಜೇವರ್ಗಿ ತಾಲ್ಲೂಕು, ಕಲಬುರಗಿ ಜಿಲ್ಲೆ.
7. ಗಣಕಕೋಶ, ಗ್ರಾಮೀಣಾಭಿವೃದ್ದಿ ಮತ್ತು ಪಂಚಾಯತ್ ರಾಜ್ ಇಲಾಖೆ, ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.